ಇಲಾಖೆ / ವಿಷಯ : DEPARTMENT / SUBJECT: 6 ಬಜೆಟ್

ಪತ್ರಿಕೆಯ ಹೆಸರು : NAME OF THE NEWS PAPER: ಉದಯಕಾಲ                ದಿನಾಂಕ : DATE : 11/2/21

# ಹೊಸ ಬಜೆಟ್‌ಗೆ ಪ್ರಸ್ತಾವ ಸಲ್ಲಿಕೆ

11/2/21

**ಬೆಂಗಳೂರು:** ಬಜೆಟ್ ಪೂರ್ವಭಾವಿ ಸಭೆಯನ್ನು ಮುಂದುವರಿಸಿರುವ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ ಅವರು ಬುಧವಾರ ನಾನಾ ಇಲಾಖೆಗಳ ಪ್ರಸ್ತಾವಗಳನ್ನು ಸ್ವೀಕರಿಸಿ ಚರ್ಚೆ ನಡೆಸಿದರು.ಆಹಾರ ಮತ್ತು ನಾಗರಿಕ ಪೂರೈಕೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, .ಸಹಕಾರ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ, ಕನ್ನಡ ಮತ್ತು ಸಂಸ್ಕೃತಿ, .ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಪ್ರವಾಸೋದ್ಯಮ, ಮುಜರಾಯಿ, ಹಿಂದುಳಿದ ವರ್ಗಗಳ ಕಲ್ಯಾಣ, ಸಣ್ಣ ನೀರಾವರಿ ಇಲಾಖೆಗಳಿಗೆ ಸಂಬಂಧಪಟ್ಟಂತೆ ಬಜೆಟ್ ಪೂರ್ವಭಾವಿ ಸಭೆ ನಡೆಯಿತು.

ಸಚಿವರು ಹಾಗೂ ಉನ್ನತ ಅಧಿಕಾರಿಗಳು 2021-22ನೇ ಸಾಲಿಗೆ ಇಲಾಖೆಗಳ ಹೊಸ ಯೋಜನೆ, ಕಾರ್ಯಕ್ರಮ, ಚಾಲ್ತಿ ಕಾಮಗಾರಿಗಳ ಬಗ್ಗೆ ಮುಖ್ಯಮಂತ್ರಿಗಳಿಗೆ ವಿಸ್ತೃತ ಪ್ರಸ್ತಾವ ಸಲ್ಲಿಸಿದರು. ಕೋವಿಡ್ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಇಲಾಖೆಗಳಿಗೆ ಹಂಚಿಕೆಯಾಗಿದ್ದ ಅನುದಾನ ಕಡಿತಗೊಳಿಸಿದ್ದರಿಂದ ಹಲವು ಯೋಜನೆಗಳು ನನೆಗುದಿಗೆ ಬಿದ್ದಿವೆ. ಹಾಗಾಗಿ ಮುಂದಿನ ಆರ್ಥಿಕ ವರ್ಷದಲ್ಲಿ ಹೆಚ್ಚು ಅನುದಾನ ನೀಡಿ ಅಭಿವೃದ್ಧಿ ಜನಪರ ಯೋಜನೆಗಳ ಜಾರಿಗೆ ನೆರವಾಗುವಂತೆ ಮನವಿ ಮಾಡಿದರು ಎಂದು ಮೂಲಗಳು ತಿಳಿಸಿವೆ.